# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, **ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ**-562110

**ದೂ.** : 080-29566001, 080-27682035 **ಇಮೇಲ್** : biaapa.devanahalli@gmail.com **ವೆಬ್‌ಸೈಟ್** : www.biaapa.tpa.gov.in


ಸಂ. ಬಿಐಎಎಪಿಎ/ಟಿಪಿ/ಸಿಸಿ/**277/2025-26** 2310 ದಿನಾಂಕ: 11 NOV 2025

## "ಪ್ರಾರಂಭಿಕ ಪ್ರಮಾಣ ಪತ್ರ"

**(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 15(1) ರನ್ವಯ)**
**(ಕರ್ನಾಟಕ ನಗರ ಯೋಜನಾ ಪ್ರಾಧಿಕಾರಗಳ ನಿಯಮಗಳ 1965 ರ ನಿಯಮ 30 ನಮೂನೆ 3 ರನ್ವಯ)**

**ವಿಷಯ:** ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿ, ಹೆಗ್ಗನಹಳ್ಳಿ ಗ್ರಾಮದ ಸ.ನಂ 44/1 ರ ಪೈಕಿ 2ಎ-1.84ಗು, 45/1 ರಲ್ಲಿ 2ಎ-23ಗು, 45/2 ರ ಪೈಕಿ 1ಎ-20ಗು, 46 ರ ಪೈಕಿ 5ಎ-32.48ಗು, 56/1 ರ ಪೈಕಿ 1ಎ-04ಗು, 57/1 ರ ಪೈಕಿ 0ಎ-25ಗು, 57/3 ರ ಪೈಕಿ 0ಎ-25.78ಗು, 57/4 ರ ಪೈಕಿ 0ಎ-02.56 ಒಟ್ಟು 14ಎ-13.66ಗು ಅಥವಾ 58037.18 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಅನುಮೋದಿತ ಪರಿಷ್ಕೃತ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆ - 02 ರಲ್ಲಿನ ಖಾತಾ ಸಂಖ್ಯೆ: 193/125 (ಪಿಐಡಿ ನಂ. 150300201201523164) ರಲ್ಲಿ 43260.17 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ **ಟವರ್ ಸಂಖ್ಯೆ 01 ರಿಂದ 08** ರಲ್ಲಿ ವಸತಿ ಉಪಯೋಗದ 878 ವಸತಿ (02-Basement + G + 18 UF) ಘಟಕಗಳ ಕಟ್ಟಡಗಳನ್ನು ನಿರ್ಮಿಸಲು ಕಟ್ಟಡ ನಕ್ಷೆಗಳಿಗೆ ಅನುಮೋದನೆ ನೀಡಿ ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲು ಕೋರಿ ಸಲ್ಲಿಸಿರುವ ಅರ್ಜಿಯ ಬಗ್ಗೆ.

**ಉಲ್ಲೇಖ:**
1. ಈ ಪ್ರಾಧಿಕಾರದಿಂದ ವಸತಿ ಉಪಯೋಗದ ಪರಿಷ್ಕೃತ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆ ನೀಡಿದ ಆದೇಶ ಪತ್ರ ಸಂಖ್ಯೆ : ಬಿಐಎಎಪಿಎ/ಟಿಪಿ/ಎಲ್ಎಓ/ಡಿಪಿ/72/2024-25/25-26 ರ ದಿನಾಂಕ: 08/10/2025.
2. ಮೆ॥ ನಾಮ್ಎಸ್ಟೇಟ್ಸ್ ಪ್ರೈವೇಟ್ ಲಿಮಿಟೆಡ್ ರವರ ಅರ್ಜಿ ದಿನಾಂಕ: 21/07/2025
3. ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲು ಕೋರಿರುವ ಪ್ರಸ್ತಾವನೆಗೆ ಸಂಬಂಧಿಸಿದಂತೆ ಪೂರ್ವ ಸಮ್ಮತಿಗಾಗಿ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರಿಗೆ ಕಡತ ಸಲ್ಲಿಸಿದ ದಿನಾಂಕ: 21/10/2025.
4. ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರು ಸಮ್ಮತಿ ನೀಡಿದ ದಿನಾಂಕ: 29/10/2025.
5. ಈ ಪ್ರಾಧಿಕಾರದ ಸಮಸಂಖ್ಯೆ ಶುಲ್ಕ ಪಾವತಿ ಸೂಚನಾ ಪತ್ರ ದಿನಾಂಕ: 30/10/2025
6. ಅರ್ಜಿದಾರರು ಶುಲ್ಕಗಳನ್ನು ಪಾವತಿಸಿದ ರಶೀದಿ ಸಂಖ್ಯೆ 0015198 ರ ದಿನಾಂಕ: 06/11/2025 ರಂತೆ ರೂ. 1,06,47,780/- (ಒಂದು ಕೋಟಿ ಆರು ಲಕ್ಷದ ನಲವತ್ತೇಳು ಸಾವಿರದ ಏಳು ನೂರ ಎಂಭತ್ತು ರೂಪಾಯಿಗಳು ಮಾತ್ರ) ರಂತೆ ಪಾವತಿಸಿರುತ್ತಾರೆ.

******************

ಮೆ॥ ಎಂಬಸ್ಸಿ ಡೆವೆಲಪ್‌ಮೆಂಟ್ಸ್ ಲಿಮಿಟೆಡ್ ರವರು ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿ, ಹೆಗ್ಗನಹಳ್ಳಿ ಗ್ರಾಮದ ಸ.ನಂ 44/1 ರ ಪೈಕಿ 2ಎ-1.84ಗು, 45/1 ರಲ್ಲಿ 2ಎ-23ಗು, 45/2 ರ ಪೈಕಿ 1ಎ-20ಗು, 46 ರ ಪೈಕಿ 5ಎ-32.48ಗು, 56/1 ರ ಪೈಕಿ 1ಎ-04ಗು, 57/1 ರ ಪೈಕಿ 0ಎ-25ಗು, 57/3 ರ ಪೈಕಿ 0ಎ-25.78ಗು, 57/4 ರ ಪೈಕಿ 0ಎ-02.56 ಒಟ್ಟು 14ಎ-13.66ಗು ಅಥವಾ 58037.18 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಉಲ್ಲೇಖ (1) ರಂತೆ ಅನುಮೋದಿತ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆ - 02 ರಲ್ಲಿನ ಖಾತಾ ಸಂಖ್ಯೆ: 193/125 (ಪಿಐಡಿ ನಂ. 150300201201523164) ರಲ್ಲಿ 43260.17 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ **ಟವರ್ ಸಂಖ್ಯೆ 01 ರಿಂದ 08** ರಲ್ಲಿ ವಸತಿ ಉಪಯೋಗದ 878 ವಸತಿ (02-Basement + G + 18 UF) ಘಟಕಗಳ ಕಟ್ಟಡಗಳನ್ನು ನಿರ್ಮಿಸುವ ಸಂಬಂಧ ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿ ಉಲ್ಲೇಖ (2) ರಂತೆ ಅರ್ಜಿ ಸಲ್ಲಿಸಲಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ : ಯುಡಿಡಿ234ಬಿಎಂಆರ್2023, ದಿನಾಂಕ: 20/11/2023 ರಂತೆ ಅನುಮೋದನೆಯಾದ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ನಿಯಮಗಳು 2020 ರಲ್ಲಿನ ನಿಯಮ 18 (5) ರನ್ವಯ ಮತ್ತು ದಿನಾಂಕ: 27/12/2023 & 03/02/2024 ರಂದು ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಅಧಿಕೃತ ಜ್ಞಾಪನಾ ಪತ್ರದಲ್ಲಿ ಸೂಚಿಸಿರುವಂತೆ ಸದರಿ ಕಟ್ಟಡ ನಕ್ಷೆಗೆ ಅನುಮೋದನೆ ನೀಡಿ, ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಂಬಂಧ ಉಲ್ಲೇಖ (3) ರಂತೆ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರನ್ನು ಪೂರ್ವ ಸಮ್ಮತಿ ಕೋರಲಾಗಿದ್ದು, ಉಲ್ಲೇಖ (4) ರಂತೆ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರು ಹಲವು ಷರತ್ತುಗಳಿಗೆ ಒಳಪಟ್ಟು ಕಟ್ಟಡ ನಕ್ಷೆಗೆ ತಾಂತ್ರಿಕ ಅನುಮೋದನೆ ನೀಡಿ, ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಸಮ್ಮತಿ ನೀಡಿರುತ್ತಾರೆ.

ಉಲ್ಲೇಖ (5) ರಲ್ಲಿನ ಈ ಕಛೇರಿಯ ಶುಲ್ಕ ಪಾವತಿ ಸೂಚನಾ ಪತ್ರದಲ್ಲಿ ಅಗತ್ಯ ಶುಲ್ಕಗಳನ್ನು ಪಾವತಿಸಿ, ಅಗತ್ಯ ದಾಖಲೆಗಳೊಂದಿಗೆ ವಲಯ ನಿಯಮಾವಳಿಗೆ ಅನುಗುಣವಾಗಿ ಕಟ್ಟಡ ನಕ್ಷೆಯನ್ನು ತಯಾರಿಸಿ ಅರ್ಜಿದಾರರ ಹಾಗೂ ಅಭಿಯಂತರರ ಸಹಿಯೊಂದಿಗೆ ಕಟ್ಟಡ ನಕ್ಷೆಯ ಮೂಲ ಪ್ರತಿ ಹಾಗೂ ನೀಲಿ ನಕ್ಷೆಯ ಪ್ರತಿಯನ್ನು ಸಲ್ಲಿಸಲು ಸೂಚಿಸಲಾಗಿರುವ ಹಿನ್ನಲೆಯಲ್ಲಿ, ಉಲ್ಲೇಖ (6) ರಂತೆ ಅರ್ಜಿದಾರರು ನಿಗಧಿತ ಶುಲ್ಕಗಳನ್ನು ಪ್ರಾಧಿಕಾರಕ್ಕೆ ಪಾವತಿಸಿ, ಅಗತ್ಯ ದಾಖಲೆಗಳೊಂದಿಗೆ ಉದ್ದೇಶಿತ ಕಟ್ಟಡಗಳ ಕಟ್ಟಡ ನಕ್ಷೆಯ ನೀಲಿ ಪ್ರತಿಗಳನ್ನು ಅನುಮೋದನೆಗಾಗಿ ಸಲ್ಲಿಸಿರುತ್ತಾರೆ. ಆದ್ದರಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಗಿನ ನಿಬಂಧನೆಗಳೊಂದಿಗೆ ನೀಡಲಾಗಿದೆ.

## <u>ನಿಬಂಧನೆಗಳು</u>

1. ಈ ಪ್ರಾಧಿಕಾರದಿಂದ ಪರಿಷ್ಕೃತ ವಸತಿ ಉಪಯೋಗದ ಅಭಿವೃದ್ಧಿ ಯೋಜನಾ ನಕ್ಷೆ ಹಂತ – 2 ಅನುಮೋದನೆ ನೀಡಿದ ಆದೇಶ ಪತ್ರ ಸಂಖ್ಯೆ: ಬಿಐಎಪಿಎ/ಟಿಪಿ/ಎಲ್ಎಒ/ಡಿಪಿ/72/2024–25/25–26 ರ ದಿನಾಂಕ: 08/10/2025 ರ ಆದೇಶದಲ್ಲಿನ ಎಲ್ಲಾ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು.
2. ಯೋಜಿಸಿರುವ ಕಟ್ಟಡಗಳನ್ನು ವಸತಿ ಉದ್ದೇಶಕ್ಕಾಗಿಯೇ ಉಪಯೋಗಿಸಬೇಕು.
3. ಈ ಪ್ರಾರಂಭಿಕ ಪ್ರಮಾಣ ಪತ್ರವನ್ನು ಎರಡು ವರ್ಷದ ಅವಧಿಗೆ ಅಂದರೆ **<u>ದಿನಾಂಕ: 07/11/2025</u>** ರಿಂದ **<u>06/11/2027</u>** ರವರೆಗೆ ಮಾತ್ರ ನೀಡಲಾಗಿರುತ್ತದೆ.
4. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ ಪ್ರಕಾರ ಇದು ಪ್ರಾರಂಭಿಕ ಪ್ರಮಾಣ ಪತ್ರವಾಗಿದ್ದು, ಈ ಪತ್ರದ ಅಧಾರದ ಮೇಲೆ ಅವಶ್ಯಕ ಇತರೆ ಪರವಾನಿಗೆಯನ್ನು **ಜಾಲಿಗೆ ಗ್ರಾಮ ಪಂಚಾಯ್ತಿ**ರವರಿಂದ ಪಡೆಯದೇ ಅಭಿವೃದ್ಧಿ ಕಾರ್ಯ ಕೈಗೊಳ್ಳಬಾರದು.
5. ವಸತಿ ಉಪಯೋಗದ ಕಟ್ಟಡಗಳನ್ನು ನಿರ್ಮಿಸಲು ಪರವಾನಿಗೆಯನ್ನು **ಜಾಲಿಗೆ ಗ್ರಾಮ ಪಂಚಾಯ್ತಿಯಿಂದ** ಕಡ್ಡಾಯವಾಗಿ ಪಡೆಯತಕ್ಕದ್ದು.
6. ವಸತಿ ಉಪಯೋಗದ ಕಟ್ಟಡಗಳನ್ನು ಹಾಲಿ ಇರುವ ವಲಯ ನಿಯಮಾವಳಿ ಹಾಗೂ ಕಟ್ಟಡದ ವಿಧಿಯ ಪ್ರಕಾರ ನಿರ್ಮಿಸಬೇಕು. ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಈ ಪ್ರಾರಂಭಿಕ ಪ್ರಮಾಣ ಪತ್ರದ ಮೂಲಕ ಅನುಮೋದಿಸಿರುವ ನಕ್ಷೆಯಂತೆಯೇ ಕೈಗೊಳ್ಳಬೇಕು. ಬೆಳವಣಿಗೆಯಲ್ಲಿನ ಯಾವುದೇ ಬದಲಾವಣೆಯನ್ನು ಈ ಕಛೇರಿಯ ಪೂರ್ವಾನುಮತಿ ಪಡೆಯದೇ ಮಾಡತಕ್ಕದ್ದಲ್ಲ.
7. ವಸತಿ ಉಪಯೋಗದ ಕಟ್ಟಡ ನಿರ್ಮಿಸಲು ನಕ್ಷೆಯಲ್ಲಿ ಬಿಟ್ಟಿರುವಂತೆ ನಡುಜಾಗವನ್ನು ಬಿಟ್ಟು ಕಟ್ಟಡ ನಿರ್ಮಿಸತಕ್ಕದ್ದು.
8. ವಸತಿ ಉಪಯೋಗದ ಕಟ್ಟಡದ ಮತ್ತು ಯಾವುದೇ ಅಭಿವೃದ್ಧಿಯ ತಳಪಾಯ, ಅಗ್ನಿಶಾಮಕ ವ್ಯವಸ್ಥೆ ಹಾಗೂ ಇತರ ಭದ್ರತಾ ವ್ಯವಸ್ಥೆಗಳು ಅರ್ಜಿದಾರರ ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಯಾವುದೇ ಅನಾಹುತಗಳಿಗೆ ಈ ಪ್ರಮಾಣ ಪತ್ರ ಬದ್ಧವಲ್ಲ ಹಾಗೂ ಪ್ರಾಧಿಕಾರವು ಜವಾಬ್ದಾರರಾಗುವುದಿಲ್ಲ.
9. ವಸತಿ ಉಪಯೋಗದ ಕಟ್ಟಡದ ಭದ್ರತೆಯ ಕುರಿತು ನುರಿತ (Structural Engineer) ತಜ್ಞರಿಂದ Structural Details ಪಡೆದು ಅದರಂತೆ ನಿರ್ವಹಿಸುವುದು ಹಾಗೂ ಅವಶ್ಯಕ ಮುಂಜಾಗ್ರತೆಗಳನ್ನು ಕೈಗೊಳ್ಳತಕ್ಕದ್ದು. ಈ ಕುರಿತು ಪ್ರಾಧಿಕಾರಕ್ಕೆ ಯಾವುದೇ ಜವಾಬ್ದಾರಿ ಇರುವುದಿಲ್ಲ.

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

**ನಂ. 333/1, ಮೊದಲನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110**

**ದೂ.** : 080-29566001, 080-27682035 **ಇಮೇಲ್** : biaapa.devanahalli@gmail.com **ವೆಬ್‌ಸೈಟ್** : www.biaapa.tpa.gov.in

10. ಪ್ರಸ್ತಾವನೆ ಸಂಬಂಧ ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾರವರ ಪತ್ರ ಸಂಖ್ಯೆ: ಬಿಐಎಎಲ್/ ಸೌತ್/ಬಿ/ 031525/1638540, ದಿನಾಂಕ: 30/04/2025 ರಂದು ನೀಡಿರುವ ನಿರಾಕ್ಷೇಪಣಾ ಪತ್ರಗಳಲ್ಲಿ ವಿಧಿಸಲಾಗಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
11. ಪ್ರಸ್ತಾವನೆ ಸಂಬಂಧ ಅಗ್ನಿ ಶಾಮಕ ಇಲಾಖೆ ರವರ ಕಛೇರಿ ಪತ್ರ ಸಂಖ್ಯೆ : (KSFES/GBC(1) /569, Docket No. KSFES/NOC/519/2024 Dated: 19/05/2025) ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
12. ಪ್ರಸ್ತಾವನೆ ಸಂಬಂಧ State Level Environment Impact Assessment Authority-Karanataka ರವರ ಪತ್ರ ಸಂಖ್ಯೆ : SEIAA70CON2021, ದಿನಾಂಕ: 17/11/2021 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
13. ಪ್ರಸ್ತಾವನೆ ಸಂಬಂಧ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿ ರವರ ಪತ್ರ ಸಂಖ್ಯೆ: Consent Order No. CTE-346767 PCB ID: 165542 Date: 02/01/2025 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
14. ಪ್ರಸ್ತಾವನೆ ಸಂಬಂಧ ಬೆಂಗಳೂರು ವಿದ್ಯುತ್ ಸರಬರಾಜು ನಿಗಮ ನಿಯಮಿತ ರವರ ಪತ್ರ ಸಂಖ್ಯೆ: ಸಿಇಬಿಆರ್‌ಎಜಡ್/ಎಸ್‌ಒಇ/ಎಇಇ-2/2018-19/8263-68, ದಿನಾಂಕ: 06/02/2019 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
15. ಪ್ರಸ್ತಾವನೆ ಸಂಬಂಧ ಭಾರತ್ ಸಂಚಾರ್ ನಿಗಮ್ ಲಿಮಿಟೆಡ್ ರವರ ಪತ್ರ ಸಂಖ್ಯೆ: ಡಿಜಿಎಂ(ಸಿಎಂ) ಬಿಜಿಟಿಡಿ/ಎನ್‌ಒಸಿ ಫಾರ್ ಹೈರೈಸ್/2021-33/28, ಬೆಂಗಳೂರು ದಿನಾಂಕ: 09/04/2021 ರಂದು ನೀಡಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
16. ಪ್ರಸ್ತಾವನೆ ಸಂಬಂಧ ಸ್ಥಳದಲ್ಲಿ ಯಾವುದೇ ಕಾಮಗಾರಿಗಳನ್ನು ಪ್ರಾರಂಭ ಮಾಡುವ ಪೂರ್ವದಲ್ಲಿ ಏರ್‌ಪೋರ್ಸ್, ಯಲಹಂಕ ರವರಿಂದ ನಿರಾಕ್ಷೇಪಣಾ ಪತ್ರವನ್ನು ಪಡೆಯತಕ್ಕದ್ದು ಹಾಗೂ ಸದರಿ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.
17. ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ-2016 ರ ಕಲಂ (3) ಮತ್ತು (4) ರ ರೀತ್ಯ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (RERA) ದಲ್ಲಿ ವಸತಿ ಯೋಜನೆಯ ಪೂರ್ವಭಾವಿ ನೋಂದಣಿಯನ್ನು ಕಡ್ಡಾಯವಾಗಿ ಮಾಡತಕ್ಕದ್ದು.
18. ಪ್ರಶ್ನಿತ ಜಮೀನುಗಳಲ್ಲಿ ಉಪಖನಿಜಗಳಾದ ಮುರ್ರಂ ಮತ್ತು ಕಟ್ಟಡ ಕಲ್ಲುಗಳ ಕಾನೂನು ಬದ್ಧ ವಿಲೇವಾರಿಗೆ ಲಭ್ಯತೆ ಕಂಡುಬಂದಲ್ಲಿ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಾವಳಿ 1944 ರ ತಿದ್ದುಪಡಿ 2023 ನಿಯಮ 3-ಎ ಅನ್ವಯ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಪೂರ್ವಾನುಮತಿಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.
19. ಕಾಮಗಾರಿಗಳಿಂದಾಗಿ ಪರಿಸರವು ಮಾಲಿನ್ಯವಾಗದಂತೆ ಎಚ್ಚರಿಕೆ ವಹಿಸತಕ್ಕದ್ದು ಮತ್ತು ಸ್ವಾಭಾವಿಕ ಮಳೆಯ ನೀರು ಇಂಗಿ ಹೋಗಲು ವ್ಯವಸ್ಥೆ (Rain Water harvesting) ಯನ್ನು ಮಾಡತಕ್ಕದ್ದು ಮತ್ತು ಸೌರಶಕ್ತಿ ವ್ಯವಸ್ಥೆಯನ್ನು ಕಟ್ಟಡದಲ್ಲಿ ಒದಗಿಸತಕ್ಕದ್ದು ಹಾಗೂ ಸಾಧ್ಯವಾದಷ್ಟು ಮಟ್ಟಿಗೆ ನಿವೇಶನದ ಮುಂಭಾಗದಲ್ಲಿ ಗಿಡ/ಮರವನ್ನು ಬೆಳೆಸತಕ್ಕದ್ದು.
20. ಈ ಪ್ರಮಾಣ ಪತ್ರ ನೀಡಿರುವ ಮಾತ್ರಕ್ಕೆ ಯಾವುದೇ ಸೌಲಭ್ಯವನ್ನು ಅರ್ಜಿದಾರರಿಗೆ ನೀಡುವ ಹೊಣೆಗಾರಿಕೆ ಪ್ರಾಧಿಕಾರಕ್ಕಿರುವುದಿಲ್ಲ.
21. ಈ ಪ್ರಾರಂಭಿಕ ಪ್ರಮಾಣ ಪತ್ರದೊಡನೆ ಅನುಮೋದಿಸಲ್ಪಟ್ಟಿರುವ ಕಟ್ಟಡ ನಕ್ಷೆಗಳನ್ನು ಕಟ್ಟಡಗಳ ನಿರ್ಮಾಣ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು.
22. ಪ್ರಶ್ನಿತ ಪ್ರದೇಶದಲ್ಲಿ ಉದ್ದೇಶಿಸಿರುವ ವಸತಿ ಉಪಯೋಗದ ಕಟ್ಟಡಗಳ ನಿರ್ಮಾಣ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳಬಾರದು.

23. ಈ ಪ್ರಾಧಿಕಾರದ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು ಹಾಗೂ ಸಂಪರ್ಕ ರಸ್ತೆಯ ಬಗ್ಗೆ ಯಾವುದೇ ತಕರಾರು ಬಂದರೂ ಈ ಪ್ರಾಧಿಕಾರವು ಹೊಣೆಯಲ್ಲ ಮತ್ತು ನೀವೇ ಸ್ವಂತ ಜವಾಬ್ದಾರಿಯಿಂದ ಬಗೆಹರಿಸಿಕೊಳ್ಳತಕ್ಕದ್ದು.

24. ಈ ಅನುಮತಿಯನ್ನು ಉಲ್ಲಂಘಿಸಿ ವ್ಯತಿರಿಕ್ತವಾಗಿ ಅಭಿವೃದ್ಧಿಗಳನ್ನು ಕೈಗೊಂಡರೆ ಅಥವಾ ನೀಡಿರುವ ಮಾಹಿತಿಗಳು ದೋಷ ಪೂರ್ಣವಾಗಿದ್ದರೆ ಅನುಮತಿಯನ್ನು ಹಿಂತೆಗೆದುಕೊಳ್ಳಲಾಗುವುದಲ್ಲದೇ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಅನ್ವಯ ಕ್ರಮ ತೆಗೆದುಕೊಳ್ಳಲಾಗುವುದು.

25. ಪ್ರಶ್ನಿತ ಪ್ರದೇಶವು ಅಂತರಾಷ್ಟ್ರೀಯ ವಾಯು ನೆಲೆಯ ಪರಿಸರದಲ್ಲಿ ಬರುವುದರಿಂದ ಶಬ್ದಮಾಲಿನ್ಯ ಸಹಿಸಿಕೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

26. ವಸತಿ ಉಪಯೋಗದ ಕಟ್ಟಡಗಳ ಅನುಮೋದನೆ ಸಂಬಂಧ ಇತರೆ ಇಲಾಖೆಗಳಿಂದ ಅಗತ್ಯವಿರುವ ಅನುಮತಿ/ ನಿರಾಕ್ಷೇಪಣಾ ಪತ್ರಗಳನ್ನು ಪಡೆಯುವ ಷರತ್ತಿಗೊಳಪಟ್ಟಿರುತ್ತದೆ.

27. ಅರ್ಜಿದಾರರು ಸಲ್ಲಿಸಿರುವ ಮಾಹಿತಿ/ದಾಖಲಾತಿಗಳು ಸುಳ್ಳು ಅಥವಾ ಪೋರ್ಜರಿಗಳಾಗಿದ್ದರೆ ಈ ಕಛೇರಿಯಿಂದ ನೀಡಿರುವ ಪ್ರಾರಂಭಿಕ ಪ್ರಮಾಣ ಪತ್ರವು ತನ್ನಿಂದ ತಾನೆ ರದ್ದಾಗುತ್ತದೆ.

11/01/2024

**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು**
**ಹಾಗೂ ಸದಸ್ಯ ಕಾರ್ಯದರ್ಶಿಗಳು,**
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ

__**ಇವರಿಗೆ:**__

**ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು,**
ಜಾಲಿಗೆ ಗ್ರಾಮ ಪಂಚಾಯ್ತಿ,
ದೇವನಹಳ್ಳಿ ತಾಲ್ಲೂಕು,
ಬೆಂಗಳೂರು ಗ್ರಾಮಾಂತರ ಜಿಲ್ಲೆ.

} ಕಟ್ಟಡ ನಕ್ಷೆಯ 4 ಪ್ರತಿಗಳೊಂದಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಲಾಗಿದೆ.

__**ಪ್ರತಿಯನ್ನು:**__

1. ಕಾರ್ಯದರ್ಶಿ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ನಂ. 1/14, 2 ನೇ ಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ ಕಾಂಪೌಂಡ್, 3 ನೇ ಕ್ರಾಸ್ ಮಿಷನ್ ರಸ್ತೆ, ಬೆಂಗಳೂರು-560027 ಇವರ ಮಾಹಿತಿಗಾಗಿ ಕಳುಹಿಸಿದೆ.
2. ಮೆ॥ ಎಂಬಸ್ಸಿ ಡೆವೆಲಪ್‌ಮೆಂಟ್ಸ್ ಲಿಮಿಟೆಡ್, #14 ನೇ ಮಹಡಿ, ಪಿನಾಕಲ್ ಟವರ್, ಎಂಬಸ್ಸಿ ಒನ್, 8 ಬಳ್ಳಾರಿ ರಸ್ತೆ, ಗಂಗಾನಗರ, ಬೆಂಗಳೂರು – 560 032 ರವರ ಮಾಹಿತಿಗಾಗಿ.
3. ಕಛೇರಿ ಪ್ರತಿ.